ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

57 (167) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಅನುದಾನಿತ ಪ್ರಾಥಮಿಕ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಿವೆ; ಯಾವ ವರ್ಷದವರೆಗೆ ಎಷ್ಟು ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ ; ಹುದ್ದೆಗಳ ಭರ್ತಿಗೆ ಇರುವ ನಿಯಮಾವಳಿಗಳೇನು; (ನಿಯಮಾವಳಿಗಳ ಪ್ರತಿ ನೀಡುವುದು)

(ಆ) 2015 ರಿಂದ ಇಲ್ಲಿಯವರೆಗೆ ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಿದಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಬಹುದಾಗಿದೆ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಅನುಮತಿ ನೀಡಲಾಗುವುದು ?